


# ವಿದೇಶದಲ್ಲಿ ಉನ್ನತ ವ್ಯಾಸಂಗ ಅವಕಾಶ ಕುರಿತ ಮಾಹಿತಿ ಕಾರ್ಯಕ್ರಮ ಯಶಸ್ವಿ

**ಸಾಗರ ಸಾಮ್ರಾಟ ಸಮಾಚಾರ**

**ಹಳಿಯಾಳ:** ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ವಿದೇಶದಲ್ಲಿ ಉನ್ನತ ವ್ಯಾಸಂಗ ಕುರಿತಾಗಿ ಅರಿವು ನೀಡುವ ಕಾರ್ಯಕ್ರಮವನ್ನು ಅಕ್ಟೋಬರ್ 21ರಂದು ಹಮ್ಮಿಕೊಳ್ಳಲಾಗಿತ್ತು.

ಬೆಳಗಾವಿಯ ಟ್ರಾನ್ಸಂಡ್ ಸಂಸ್ಥೆಯ ಶ್ರೀಮತಿ. ಬೆನಜೀರ್ ಶೇಕ್ ಇವರು ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡಲು ಇಚ್ಚಿಸುವ ವಿದ್ಯಾರ್ಥಿಗಳು ಅರ್ಹತಾ ಪರೀಕ್ಷೆಗಳಾದ ಜಿ ಆರ್ ಇ, ಐ ಇ ಎಲ್ ಟಿ ಎಸ್, ಟೋಫೆಲ್ ಪರೀಕ್ಷೆಗಳಲ್ಲಿ ಉತ್ತಮ ಪ್ರದರ್ಶನ ತೋರುವುವುದು ಅತ್ಯಗತ್ಯ ಎಂದು ಹೇಳಿದರು . ಈ ಅರ್ಹತಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಲು ಬೇಕಾಗಿರುವ ತಯಾರಿಯ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡಿದರು.

ವಿದೇಶದಲ್ಲಿನ ಶಿಕ್ಷಣ ನೀತಿ, ಗುಣ ಮಟ್ಟದ ಶಿಕ್ಷಣ ಹಾಗೂ ಉದ್ಯೋಗಾವಕಾಶಗಳ ಕುರಿತು ವಿವರಿಸಿದರು. ವಿದೇಶದಲ್ಲಿ ವ್ಯಾಸಂಗ ಮಾಡಲು ಬಯಸುವ ವಿದ್ಯಾರ್ಥಿಗಳು ಆಂಗ್ಲ ಭಾಷೆಯ ಮೇಲೆ ಪ್ರಭುತ್ವ ಹೊಂದುವುದು ಅವಶ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಡೀನ್ ಪ್ರೊ. ಸುಧೀರ್ ಕುಲಕರ್ಣಿ ಅರ್ಹತಾ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದಲ್ಲಿ ಜರ್ಮನಿ, ಅಮೇರಿಕಾ, ಸಿಂಗಾಪುರ , ನ್ಯೂಜಿಲ್ಯಾಂಡ್ ದಂತಹ ದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಿ ಉಜ್ವಲ ಭವಿಷ್ಯ ಹೊಂದಬಹುದು ಎಂದು ಹೇಳಿದರು. ಪ್ರೊ. ನವೀನ್ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ರಜತ್ ಆಚಾರ್ಯ ಕಾರ್ಯಕ್ರಮ ಸಂಯೋಜಿಸಿದ್ದರು.

3ನೇ ಹಾಗೂ 4ನೇ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ನೂರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜನಮಾಧ್ಯಮ

# ವಿದೇಶದಲ್ಲಿ ಉನ್ನತ ವ್ಯಾಸಂಗ ಅವಕಾಶ ಮಾಹಿತಿ ಕಾರ್ಯಕ್ರಮ ಯಶಸ್ವಿ



»ಜನಮಾಧ್ಯಮ, ಹಳಿಯಾಳ: ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ವಿದೇಶದಲ್ಲಿ ಉನ್ನತ ವ್ಯಾಸಂಗ ಕುರಿತಾಗಿ ಅರಿವು ನೀಡುವ ಕಾರ್ಯಕ್ರಮವನ್ನು ಅಕ್ಟೋಬರ್ 21ರಂದು ಹಮ್ಮಿಕೊಳ್ಳಲಾಗಿತ್ತು. ಬೆಳಗಾವಿಯ ಟ್ರಾನ್ಸೆಂಡ್ ಸಂಸ್ಥೆಯ ಶ್ರೀಮತಿ ಬೆನಜೀರ್ ಶೇಖ್ ಇವರು ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡಲು ಇಚ್ಛಿಸುವ ವಿದ್ಯಾರ್ಥಿಗಳು ಅರ್ಹತಾ ಪರೀಕ್ಷೆಗಳಾದ ಜಿ ಆರ್ ಇ, ಐ ಇ ಎಲ್ ಟಿ ಎಸ್, ಟೋಫೆಲ್ ಪರೀಕ್ಷೆಗಳಲ್ಲಿ ಉತ್ತಮ ಪ್ರದರ್ಶನ ತೋರುವುದು ಅತ್ಯಗತ್ಯ ಎಂದು ಹೇಳಿದರು. ಈ ಅರ್ಹತಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಲು ಬೇಕಾಗಿರುವ ತಯಾರಿಯ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡಿದರು. ವಿದೇಶದಲ್ಲಿನ ಶಿಕ್ಷಣ ನೀತಿ, ಗುಣಮಟ್ಟದ ಶಿಕ್ಷಣ ಹಾಗೂ ಉದ್ಯೋಗಾವಕಾಶಗಳ ಕುರಿತು ವಿವರಿಸಿದರು. ವಿದೇಶದಲ್ಲಿ ವ್ಯಾಸಂಗ ಮಾಡಲು ಬಯಸುವ ವಿದ್ಯಾರ್ಥಿಗಳು ಆಂಗ್ಲ ಭಾಷೆಯ ಮೇಲೆ ಪ್ರಭುತ್ವ ಹೊಂದುವುದು ಅವಶ್ಯವಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಡೀನ್ ಪ್ರೊ. ಸುಧೀರ್ ಕುಲಕರ್ಣಿ ಅರ್ಹತಾ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದಲ್ಲಿ ಜರ್ಮನಿ, ಅಮೇರಿಕಾ, ಸಿಂಗಾಪುರ, ನ್ಯೂಜಿಲ್ಯಾಂಡ್ ನಂತಹ ದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಿ ಉಜ್ವಲ ಭವಿಷ್ಯ ಹೊಂದಬಹುದು ಎಂದು ಹೇಳಿದರು. ಪ್ರೊ. ನವೀನ್ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಟ್ರೈನಿಂಗ್ ಆ್ಯಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ರಜತ್ ಆಚಾರ್ಯ ಕಾರ್ಯಕ್ರಮ ಸಂಯೋಜಿಸಿದ್ದರು. 3ನೇ ಹಾಗೂ 4ನೇ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ನೂರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Main Edition
Oct 25, 2024 Page No. 2
Powered by: erelego.com